# ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.

**ಉಪಸ್ಥಿತರುಃ- ಶ್ರೀ ರಾಹುಲ ಚಾಂಭಾರ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

## ಸಿ.ಸಿ. ನಂಃ 1690/2023

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಸೈದಾಪೂರ ಪೋಲಿಸ್ ಠಾಣೆ**

**// ವಿರುದ್ದ //**

**ಆರೋಪಿ : ಅಂಜಪ್ಪ.**

## ದೋಷಾರೋಪಣೆ

**ಆರೋಪಿತರುಃ**

1. ಅಂಜಪ್ಪ ತಂದೆ ಭೀಮಣ್ಣ ಗುಡ್ಲಾ,
   ವಃ 46 ವರ್ಷ,
   ಉಃ ಕೂಲಿಕೆಲಸ,
   ಸಾಃ ದುಪ್ಪಲ್ಲಿ ಗ್ರಾಮ,
   ತಾಃ & ಮತ್ತು ಜಿಃ ಯಾದಗಿರಿ.

ದಿನಾಂಕ 29.12.2022 ರಂದು ಮಃ 03.00 ಗಂಟೆ ಸುಮಾರಿಗೆ ದುಪ್ಪಲ್ಲಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಚಾಸಾಃ1 ರವರು ಕರ್ತವ್ಯದ ಮೇಲೆ ಇದ್ದಾಗ ಆರೋಪಿತನು ಅಂಗನವಾಡಿ ಕೇಂದ್ರ ನಂಬರ 1 ನೇದ್ದರಲ್ಲಿ ಅತಿಕ್ರಮ ಪ್ರವೇಶ ಮಾಡಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.448 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**2.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರನ್ನು ಎಡಗೈ ಹೆಬ್ಬೆರಳನ್ನು ಹಲ್ಲಿನಿಂದ ಕಡಿದು ಗಾಯಮಾಡಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.324 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**3.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರನ್ನು ಗೋಡೆಗೆ ಜೋರಾಗಿ ದಬ್ಬಿಕೊಟ್ಟ, ಬಲಗೈ ತಿರುವಿ ಕೈಯಿಂದ ಹೊಡೆದಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.323 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**4.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಸಾರ್ವಜನಿಕ ನೌಕರಳ ಮೇಲೆ ಹಲ್ಲೆ ಮಾಡಿದ್ದು ಅಲ್ಲದೇ ಅಂಗನವಾಡಿ ಕೇಂದ್ರದ ಹೊರಗಿನ ಕಂಪೌಂಡ ಗೇಟ ಹಾಕಿ ಚಾಸಾಃ1 ರವರ ಸೀರೆ ಹಿಡಿದು ಎಳೆದು ಅವಮಾನ ಮಾಡಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.354 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**5.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರಿಗೆ ಏಕವಚನದಲ್ಲಿ ಏ ರಾಧಿಕಾ ನನಗೆ ಅಂಗನವಾಡಿಗೆ ಬಂದಿರುವ ಸಾಮಗ್ರಿ ಕೊಡು ಅಂತಾ ಅವಾಚ್ಯ ಶಬ್ದಗಳಿಂದ ಬೈದಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.504 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**6.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರು ಅದಕ್ಕೆ ಒಪ್ಪದಿದ್ದಾಗ ಆರೋಪಿತನು ಅವೇನೂ ಸರಕಾರದ ಸಾಮಾನು ನಿಮ್ಮಪ್ಪನ ಮನೆಯಿಂದ ಕೊಡಲ್ಲ, ಸೀದಾ ನನಗೆ ಸಾಮಾನು ಕೊಡು ಇಲ್ಲ ಅಂದರೆ ನೀನು ಇಲ್ಲಿ ನೌಕಾರಿ ಮಾಡಂಗಿಲ್ಲ ಇಲ್ಲಿಂದ ಜಾಗ ಖಾಲಿ ಮಾಡು ಅಂತಾ ಜೀವ ಬೆದರಿಕೆ ಹಾಕಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.506 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**7.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರಿಗೆ ಕೈಹಿಡಿದು ಎಳೆದು ಅಂಗನವಾಡಿ ಕೇಂದ್ರದಿಂದ ಹೊರಗಡೆ ಹೋಗದಂತೆ ತಡೆದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.341 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**8.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಚಾಸಾಃ1 ರವರಿಗೆ ಕರ್ತವ್ಯಕ್ಕೆ ಅಡಚಣೆ ಮಾಡಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.332 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

ದಿನಾಂಕಃ **11.03.2024.**
ಸ್ಥಳಃ ಯಾದಗಿರಿ

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ**
**ನ್ಯಾಯಾಧೀಶರು ಯಾದಗಿರಿ.**